**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಆಳಂದ**

ಸಿ.ಸಿ. ನಂಬರ 2137 /2025 ಸಿ.ಡಬ್ಲೂ.**1** ಪಿ.ಡಬ್ಲೂ.**1**

| | |
|---|---|
| ಹೆಸರು | ಸುಬಣ್ಣಾ |
| ಗಂಡ | ಶರಣಪ್ಪಾ |
| ವಯಸ್ಸು | 60 ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ನೆಲ್ಲೂರು |

ದಿನಾಂಕಃ 06-03-2026

ಸತ್ಯ ಪ್ರತಿಜ್ಞೆಯ ಮೇರೆಗೆ

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ಅವರಿಂದ ಃ

ಆರೋಪಿ ನನ್ನ ತಮ್ಮನಾಗಬೇಕು. ಚಾಸಾ-2 ರಿಂದ 5 ಪರಿಚಯ ಇರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಆರೋಪಿಯ ನನಗೆ ಅವಾಚ್ಯ ಬೈದಿರುವುದಿಲ್ಲ. ಹೊಡೆ ಬಡೆ ಮಾಡಿರುವುದಿಲ್ಲ. ಕೈಯಿಂದ ಜಗ್ಗಾಡಿರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ದೂರನ್ನು ಸಲ್ಲಿಸಿರುವುದಿಲ್ಲ. ಪೋಲಿಸರು ಒಂದು ದಾಖಲೆಯ ಮೇಲೆ ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ನನಗೆ ಹಷಾರು ಇಲ್ಲದ ಕಾರಣ ಆಸ್ಪತ್ರೆಗೆ ಹೋಗಿರುತ್ತೇನೆ. ಸಾಕ್ಷಿಯು ದೂರಿನಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ನಿಪಿ.1 ಮತ್ತು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

ಪಾಟೀ ಸವಾಲುಃ ಸ.ಸ.ಅ. ವಕೀಲರಿಂದ

ಸಾಕ್ಷಿಗೆ ದಿಃ 29-08-2024 ರಂದು ಬೆ 9.00 ರಿಂದ 10.00 ಗಂಟೆವರೆಗೆ ನಾನು ತೋರಿಸಿದ ಸ್ಥಳದಲ್ಲಿ ಪೋಲಿಸರು ಚಾಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಇರುವ ಮಾಹಿತಿ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರಿಂದ

ಪಾಟೀ ಸವಾಲು ಇರುವುದಿಲ್ಲ.

ಮರುವಿಚಾರಣೆ ಇರುವುದಿಲ್ಲ.

ಓ.ಹೇ.ಕೆ.ಸರಿ ಇದೆ.

ಸಿ ಸಿ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ. ಎಫ್.ಸಿ ಆಳಂದ